ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಯಚೂರು ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಗಳ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

276(391) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದಲ್ಲಿ ಇರುವ ವಕ್ಫ್‌ಗೆ ಸೇರಿರುವ ಒಟ್ಟು ಆಸ್ತಿ ಎಷ್ಟು; ಸದರಿ ವಕ್ಫ್ ಸೇರಿರುವ ಆಸ್ತಿಯನ್ನು ರಕ್ಷಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ವಕ್ಫ್ ಅಧೀನದಲ್ಲಿ ಬರುವ ರಾಯಚೂರು ಈದ್ಗಾ ಮೈದಾನವನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ವಕ್ಫ್ ಅಧೀನದಲ್ಲಿ ಬರುವ ಆಸ್ಪತ್ರೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?